ಕುಂದಾಪುರ ತಾಲ್ಲೂಕಿನ ಬೈಂದೂರಿನಲ್ಲಿನ ಸರ್ಕಾರಿ ಕಾಲೇಜಿಗೆ ಉಪನ್ಯಾಸಕರ ನೇಮಕಾತಿ

241 (372) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) - ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಬೈಂದೂರಿನಲ್ಲಿ ಸರಕಾರಿ ಕಾಲೇಜು ಇರುವುದು ಸರಕಾರಕ್ಕೆ ತಿಳಿದಿದೆಯೇ ;

ಆ) ಹಾಗಿದ್ದಲ್ಲಿ, ಈ ಕಾಲೇಜಿಗೆ ಉಪನ್ಯಾಸಕರ ನೇಮಕಾತಿ ಮಾಡದಿರಲು ಕಾರಣಗಳೇನು;

ಇ) ಯಾವ ಯಾವ ವಿಷಯಗಳಲ್ಲಿ ಉಪನ್ಯಾಸಕರ ಕೊರತೆಯಿದೆ ; (ವಿವರ ನೀಡುವುದು);

ಈ) ಈ ಉಪನ್ಯಾಸಕರ ಕೊರತೆಯನ್ನು ಯಾವಾಗ ನಿವಾರಣೆ ಮಾಡಲಾಗುವುದು ?

ಡಾ।। ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಈ ಕಾಲೇಜಿಗೆ ಉಪನ್ಯಾಸಕರನ್ನು ನೇಮಕಾತಿ ಮಾಡಲಾಗಿದೆ. ಆದರೆ, ನಂತರ ಕೆಲವು ಬೋಧಕರುಗಳು ವರ್ಗಾವಣೆಯಾದುದರಿಂದ ಮತ್ತು ನಿವೃತ್ತಿಯಾದುದರಿಂದ ಕೆಲವು ವಿಷಯಗಳಲ್ಲಿ ಕೊರತೆ ಇದೆ.

ಇ) ಇತಿಹಾಸ, ರಾಜ್ಯಶಾಸ್ತ್ರ, ಹಾಗೂ ವಾಣಿಜ್ಯ ಶಾಸ್ತ್ರ ವಿಷಯದಲ್ಲಿ ಉಪನ್ಯಾಸಕರ ಕೊರತೆ ಇದೆ.

ಈ) ತಾತ್ಕಾಲಿಕವಾಗಿ ಅರೆಕಾಲಿಕ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡು ಕೊರತೆ ನಿವಾರಣೆ ಮಾಡಿಕೊಳ್ಳಲಾಗಿದೆ. ಈ ಮೊದಲು ಸರ್ಕಾರಿ ಕಾಲೇಜುಗಳಲ್ಲಿ ದೀರ್ಘ ಅವಧಿಯಿಂದ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಸೇವೆ ಸಕ್ರಮಗೊಳಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ. ಈ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಂಡ ನಂತರ ಮತ್ತು ಉಪನ್ಯಾಸಕರುಗಳ 78 ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬುವ ಆಯ್ಕೆ ಪ್ರಕ್ರಿಯೆ ಮುಗಿದ ಕೂಡಲೇ ಈ ಕಾಲೇಜಿಗೆ ಉಪನ್ಯಾಸಕರನ್ನು ಸ್ಥಳನಿಯುಕ್ತಿಗೊಳಿಸಿ ಕೊರತೆ ನಿವಾರಣೆ ಮಾಡಲಾಗುವುದು.

ಬೈಂದೂರು ಕ್ಷೇತ್ರದಲ್ಲಿ ಕ್ಷೇತ್ರ ಸಂಪನ್ಮೂಲ ಕೇಂದ್ರ (ಬಿ.ಆರ್.ಸಿ) ಪ್ರಾರಂಭ

242 (376) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೈಂದೂರ ಕ್ಷೇತ್ರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ವ್ಯಾಪ್ತಿಯ ಕ್ಷೇತ್ರ ಸಂಪನ್ಮೂಲ ಕೇಂದ್ರವು ಈವರೆಗೂ ಆರಂಭವಾಗದಿರುವುದಕ್ಕೆ ಕಾರಣಗಳೇನು ;

ಆ) ಈ ಕೇಂದ್ರವನ್ನು ಯಾವಾಗ ಪ್ರಾರಂಭಿಸಲಾಗುವುದು ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಕೇಂದ್ರ ಸರ್ಕಾರದ ಆದೇಶ ಮತ್ತು ಸರ್ವ ಶಿಕ್ಷಾ ಅಭಿಯಾನ ಮಾರ್ಗಸೂಚಿಯ ಪ್ರಕಾರ ಕ್ಷೇತ್ರ ಸಂಪನ್ಮೂಲ ಕೇಂದ್ರಗಳನ್ನು ಕಂದಾಯ ತಾಲ್ಲೂಕುಗಳಿಗೆ ಮಾತ್ರ ಮಂಜೂರಾತಿಯನ್ನು ಸೀಮಿತಗೊಳಿಸಲಾಗಿದೆ. ಬೈಂದೂರು ಕ್ಷೇತ್ರವು ಶೈಕ್ಷಣಿಕ ತಾಲ್ಲೂಕಾಗಿದ್ದು, ಇದನ್ನು ಕಂದಾಯ ತಾಲ್ಲೂಕಾಗಿ ಪರಿಗಣಿಸದ ಕಾರಣ ಬೈಂದೂರಿಗೆ ಕ್ಷೇತ್ರ ಸಂಪನ್ಮೂಲ ಕೇಂದ್ರವು ಮಂಜೂರಾಗಿರುವುದಿಲ್ಲ.